ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 613 ಸೇಸೇನಿ 2016

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನಸೌಧ, ಬೆಂಗಳೂರು
ದಿನಾಂಕ: 06/12/2016

ಇಂದ,
ಸರ್ಕಾರದ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
ವಿಧಾನಸೌಧ, ಬೆಂಗಳೂರು

ರವರಿಗೆ,
ಆಡಳಿತಾಧಿಕಾರಿ
ಕರ್ನಾಟಕ ಪರೀಕ್ಷಾ ಪ್ರಾಧಿಕಾರ
18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ
ಮಲ್ಲೇಶ್ವರಂ
ಬೆಂಗಳೂರು-560012

ಮಾನ್ಯರೇ,

ವಿಷಯ : ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇರ ನೇಮಕಾತಿಯಲ್ಲಿ ಅಂಗವಿಕಲ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಕ್ರಮ ಕೈಗೊಳ್ಳುವ ಕುರಿತು

ಉಲ್ಲೇಖ : ಪತ್ರ ಸಂಖ್ಯೆ: ಇಡಿ / ಕೆಇಎ / ಆಡಳಿತ / 55 / 14-15 (ಭಾಗ), ದಿನಾಂಕ: 29/09/2016

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಪತ್ರದ ಕಡೆಗೆ ಗಮನ ಸೆಳೆಯಲಾಗಿದೆ. ದಿನಾಂಕ: 29/09/2016ರ ಉಲ್ಲೇಖಿತ ಪತ್ರದಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಮೀಸಲಿರಿಸಿದ ಹುದ್ದೆಗಳಿಗೆ ಯಾವೊಬ್ಬ ಅಂಗವಿಕಲ ಅಭ್ಯರ್ಥಿಯು ಲಭ್ಯವಾಗದಿದ್ದಲ್ಲಿ ಅಂತಹ ಹುದ್ದೆಗಳನ್ನು ಇತರೆ ವರ್ಗದವರಿಗೆ ಪರಿಗಣಿಸಬಹುದಾದ ಬಗ್ಗೆ ಸ್ಪಷ್ಟೀಕರಣ ಕೋರಲಾಗಿರುತ್ತದೆ.

ರಾಜ್ಯ ಸಿವಿಲ್ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ವಿಕಲಚೇತನರಿಗಾಗಿ ಗುರುತಿಸಿ ಅಧಿಸೂಚಿಸಿದ ರಿಕ್ತ ಸ್ಥಾನಗಳನ್ನು ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995ರ ಸೆಕ್ಷನ್ 36ರನ್ವಯ ಆ ನೇಮಕಾತಿಯಲ್ಲಿ ಅಧಿಸೂಚಿಸಿರುವ ಅಂಗವೈಕಲ್ಯ ಹೊಂದಿದ ಅಭ್ಯರ್ಥಿಯಿಂದಲೇ ಭರ್ತಿ ಮಾಡಬೇಕಾಗಿರುತ್ತದೆ.

ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯತಕ್ಕದ್ದು (Carry forward). ಮುಂದಿನ ನೇಮಕಾತಿಯಲ್ಲಿಯೂ ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ನೇರ ಮೀಸಲಾತಿಯಡಿ ಬರುವ ಆಯಾ ಪ್ರವರ್ಗದ ಇತರ ಅಂಗವಿಕಲತೆಯುಳ್ಳ ಅರ್ಹ ವಿಕಲಚೇತನ ಅಭ್ಯರ್ಥಿಯಿಂದ ಭರ್ತಿ ಮಾಡತಕ್ಕದ್ದು. ಒಂದು ವೇಳೆ ಯಾವುದೇ ವಿಕಲಚೇತನ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ, ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳಲು ದಿನಾಂಕ: 22/11/2016ರ ಆದೇಶ ಸಂಖ್ಯೆ: ಸಿಆಸುಇ 235 ಸೇಸೇನಿ 2012ರಲ್ಲಿ ಸೂಚನೆಗಳನ್ನು ನೀಡಲಾಗಿದೆ (ಪ್ರತಿ ಲಗತ್ತಿಸಿದೆ). ದಿನಾಂಕ: 22/11/2016ರ ಆದೇಶದಂತೆ ಕ್ರಮವಹಿಸುವಂತೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

Gayathri M.R 06/12/16

(ಗಾಯತ್ರಿ.ಎಂ.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾನಿಯಮಗಳು-1)

5031 16/12/16

**ಕರ್ನಾಟಕ ಸರ್ಕಾರದ ನಡವಳಿಗಳು**

**ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ**

**ವಿಷಯ** : ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995ರಡಿ ರಾಜ್ಯ ಸಿವಿಲ್ ಸೇವೆಯಲ್ಲಿ ವಿಕಲಚೇತನರಿಗೆ ಮೀಸಲರಿಸಿರುವ ರಿಕ್ತಸ್ಥಾನಗಳಲ್ಲಿ ನಿಗದಿತ ಅಂಗವೈಕಲ್ಯತೆ ಹೊಂದಿದ ಅಭ್ಯರ್ಥಿ ಲಭ್ಯವಿಲ್ಲದೇ ಭರ್ತಿಯಾಗದ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಪರಿಗಣಿಸುವ ಬಗ್ಗೆ.

*****

ಪ್ರಸ್ತಾವನೆ:

ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995ರ ಸೆಕ್ಷನ್ 36ರಲ್ಲಿ ವಿಕಲಚೇತನರಿಗಾಗಿ ಗುರುತಿಸಿ ಅಧಿಸೂಚಿಸಿದ ಹುದ್ದೆಗಳ ರಿಕ್ತ ಸ್ಥಾನಗಳಲ್ಲಿ ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೆ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಅವಕಾಶವನ್ನು ರಾಜ್ಯ ಸಿವಿಲ್ ಸೇವಾ ಹುದ್ದೆಗಳ ನೇರನೇಮಕಾತಿಯಲ್ಲಿ ಪರಿಗಣಿಸುವಂತೆ ನ್ಯಾಷನಲ್ ಫೆಡರೇಷನ್ ಆಫ್ ದಿ ಬ್ಲೈಂಡ್ ಸಂಸ್ಥೆಯು 2012 ರಿಂದ ಹಲವು ಬಾರಿ ರಾಜ್ಯ ಸರ್ಕಾರಕ್ಕೆ ಸಲ್ಲಿಸಿರುವ ಮನವಿಗಳನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಸಿಆಸುಇ 235 ಸೆನೆನಿ 2012, ಬೆಂಗಳೂರು, ದಿನಾಂಕ: 22/11/2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯ ಸಿವಿಲ್ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ವಿಕಲಚೇತನರಿಗಾಗಿ ಗುರುತಿಸಿ ಅಧಿಸೂಚಿಸಿದ ರಿಕ್ತ ಸ್ಥಾನಗಳನ್ನು ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995ರ ಸೆಕ್ಷನ್ 36ರನ್ವಯ ಆ ನೇಮಕಾತಿಯಲ್ಲಿ ಅಧಿಸೂಚಿಸಿರುವ ಅಂಗವೈಕಲ್ಯ ಹೊಂದಿದ ಅಭ್ಯರ್ಥಿಯಿಂದಲೇ ಭರ್ತಿ ಮಾಡಬೇಕಾಗಿರುತ್ತದೆ.

ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯತಕ್ಕದ್ದು (Carry forward). ಮುಂದಿನ ನೇಮಕಾತಿಯಲ್ಲಿಯೂ ಅಧಿಸೂಚಿತ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ನೇರ ಮೀಸಲಾತಿಯಡಿ ಬರುವ ಆಯಾ ಪ್ರವರ್ಗದ ಇತರ ಅಂಗವಿಕಲತೆಯುಳ್ಳ ಅರ್ಹ ವಿಕಲಚೇತನ ಅಭ್ಯರ್ಥಿಯಿಂದ ಭರ್ತಿ ಮಾಡತಕ್ಕದ್ದು. ಒಂದು ವೇಳೆ ಯಾವುದೇ ವಿಕಲಚೇತನ ಅಭ್ಯರ್ಥಿ ಲಭ್ಯವಿಲ್ಲದಿದ್ದಲ್ಲಿ, ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳತಕ್ಕದ್ದೆಂದು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

ಪು.ತಿ.ನೋ...2

ಈ ಆದೇಶದಲ್ಲಿನ ಸೂಚನೆಗಳನ್ನು ಈ ಆದೇಶದ ದಿನಾಂಕದ ನಂತರ ಮಾಡುವ ಎಲ್ಲಾ ನೇರ ನೇಮಕಾತಿ ಅಧಿಸೂಚನೆಗಳಲ್ಲಿ ಅಳವಡಿಸಿಕೊಂಡು ನೇಮಕಾತಿ ಪ್ರಕ್ರಿಯೆ ಕೈಗೊಳ್ಳಲು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

Gayathri M.R 22/11/16

(ಗಾಯತ್ರಿ ಎಂ.ಆರ್)

ಸರ್ಕಾರದ ಅಧೀನ ಕಾರ್ಯದರ್ಶಿ

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ

(ಸೇವಾ ನಿಯಮಗಳು-1)

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ದಿನಾಂಕ: 22/11/2016ರ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 200 ಪ್ರತಿಗಳನ್ನು ಒದಗಿಸಲು.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು
4. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು
5. ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
7. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರು
8. ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯಮಾರ್ಗ, ಚಾಣಕ್ಯಪುರಿ, ನವದೆಹಲಿ-110021
9. *ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ / ಪರಿಷತ್ತು, ಬೆಂಗಳೂರು
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯಭವನ, ಕೆ.ಜಿ.ರಸ್ತೆ, ಬೆಂಗಳೂರು- 560 009.
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು
15. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು
16. ಎಲ್ಲಾ ಆರಕ್ಷಕ ಮಹಾ ನಿರೀಕ್ಷಕರು ಮತ್ತು ಉಪ ಆರಕ್ಷಕ ಮಹಾ ನಿರೀಕ್ಷಕರು
17. ಎಲ್ಲಾ ಇಲಾಖಾ ಮುಖ್ಯಸ್ಥರು
18. ಎಲ್ಲಾ ಪ್ರಾದೇಶಿಕ ಆಯುಕ್ತರು / ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ / ಎಲ್ಲಾ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು
19. ಸರ್ಕಾರದ ಎಲ್ಲಾ ವಿಶೇಷ / ಅಪರ / ಜಂಟಿ / ಉಪ / ಅಧೀನ ಕಾರ್ಯದರ್ಶಿಗಳು
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು
21. ಶಾಖಾ ರಕ್ಷಾ ಕಡತ / ಅಧಿಕ ಪ್ರತಿಗಳು

(* ಮುಖ ಪತ್ರದೊಂದಿಗೆ)